**ಪ್ರಧಾನ ಸಿವಿಲ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ ಚಿಂಚೋಳಿ**

**ಸಿಸಿ ನಂ. 116/2023**

| | | | |
|---|---|---|---|
| ಹೆಸರು | : | ಭೀಮಶಾ | ಚಾ.ಸಾ.4 |
| ತಂದೆಯ ಹೆಸರು | : | ಗುಂಡಪ್ಪ | ಪ್ರಾ.ಸಾ.2 |
| ವಯಸ್ಸು | : | 41 ವರ್ಷ | ದಿನಾಂಕಃ 24-06-2024 |
| ಉದ್ಯೋಗ | : | ವ್ಯಾಪಾರ | |
| ವಾಸಸ್ಥಳ | : | ಬೆಂಕೆಪಳ್ಳಿ | |

**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸಹಾಯಕ ಸರಕಾರಿ ಅಭಿಯೋಜಕರಿಂದಃ**

ಚಾಸಾ-5 ರವರು ನಮ್ಮ ಊರಿನವರು. ನ್ಯಾಯಾಲಯದ ಮುಂದೆ ಇರುವ 1 ಮತ್ತು 3 ನೇ ಆರೋಪಿತರು ನಮ್ಮ ಊರಿನವರು. ಈಗ ನೋಡುತ್ತಿರುವ ದಾಖಲೆಯಲ್ಲಿರುವ ಸಹಿ ನನ್ನದೆ. ಸದರಿ ದಾಖಲೆಯನ್ನು ನಿಪಿ-3 ಎಂದು ಮತ್ತು ಅದರಲ್ಲಿರುವ ನನ್ನ ಸಹಿಯನ್ನು ನಿಪಿ-3(ಎ) ಎಂದು ಗುರುತಿಸಲಾಯಿತು.

ಈಗ 2 ವರ್ಷಗಳ ಹಿಂದೆ ಮಧ್ಯಾಹ್ನ ಸಮಯಕ್ಕೆ ಹೊಲದಿಂದ ಮರಳಿ ಬರುವಾಗ ಚಾಸಾ-13 ರವರು ನನಗೆ ಸಹಿ ಮಾಡು ಎಂದು ಹೇಳಿದಕ್ಕೆ ಸಹಿ ಮಾಡಿದ್ದೇನೆ. ನನ್ನ ಸಮಕ್ಷಮ ಯಾವುದೇ ವಸ್ತು ಜಪ್ತಿ ಮಾಡಿಲ್ಲ.

(ಈ ಹಂತದಲ್ಲಿ ತನಿಖಾಧಿಕಾರಿಯವರ ಮುಂದೆ ಸಲ್ಲಿಸಿರುವ ಜಪ್ತಿ ಪಂಚನಾಮೆಗೆ ಈ ಸಾಕ್ಷಿ ಸಂಪೂರ್ಣ ಪ್ರತಿಕೂಲ ಸಾಕ್ಷ್ಯ ನುಡಿಯುತ್ತಿದ್ದು, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೊಡುವಂತೆ ಸ.ಸ.ಅ.ರವರು ಅನುಮತಿ ಕೋರುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಸಹಾಯಕ ಸರಕಾರಿ ಅಭಿಯೋಜಕರಿಂದ-**

ದಿನಾಂಕ 23-07-2022 ರಂದು ಸಾಯಂಕಾಲ 6 ರಿಂದ 7 ಗಂಟೆ ಸುಮಾರಿಗೆ 1 ನೇ ಆರೋಪಿಯ ಮನೆಯಿಂದ 4 ಆಡುಗಳನ್ನು ಜಪ್ತಿ ಮಾಡಿ ಜಪ್ತಿ ಪಂಚನಾಮೆಯನ್ನು ಬರೆದಿರುತ್ತಾರೆ

ಎಂದರೆ ಸರಿಯಲ್ಲ. ಆಗ ನನ್ನ ಜೊತೆ ಚಾಸಾ-5 ರವರು ಇದ್ದರು ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರವಾಗಿ ಶ್ರೀ ಆರ್.ಎಮ್.ವಿ ವಕೀಲರಿಂದಃ-**

ನಿಪಿ-3 ರಲ್ಲಿರುವ ಸಹಿ ನನ್ನದಲ್ಲ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲಾ**

**(ಮುಕ್ತ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**
**ಓ.ಹೇ.ಕೇ. ಸರಿ ಇದೆ.**

**ಪ್ರಧಾನ ಪ್ರ.ದ.ನ್ಯಾ.ದಂ. ಚಿಂಚೋಳಿ**